ಅನುಬಂಧ–II

459(460) ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಮರ (ಲಿಂಗಸುಗೂರು) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಯಚೂರು ನಗರದಲ್ಲಿರುವ ಸ್ನಾತಕೋತ್ತರ ಪದವಿ ಕೇಂದ್ರದಲ್ಲಿರುವ ವಿದ್ಯಾರ್ಥಿಗಳ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ?

ಶ್ರೀ ಡಿ ಎಚ್ ಶಂಕರೇಗೌಡ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

460(461) ಶ್ರೀ ಅಮರೇಗೌಡ ವಾಟೀಲ್ ಬಯ್ಯಾಮರ(ಲಿಂಗಸುಗೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸರ್ವ ಶಿಕ್ಷಣ ಅಭಿಯಾನ ಯೋಜನೆಯಲ್ಲಿ ಶಿಕ್ಷಕರನ್ನು ಯಾವ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ,

ಆ) ಮಾಡಿದ್ದಲ್ಲಿ, ಯಾವ ರೀತಿ ಅವರಿಗೆ ಗೌರವಧನ/ ಸಂಭಾವನೆಯನ್ನು ನೀಡಲಾಗುತ್ತದೆ,

ಇ) ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ವ ಶಿಕ್ಷಣ ಅಭಿಯಾನದಡಿ ಹೊಸ ಕಿರಿಯ ಪ್ರಾದಮಿಕ ಶಾಲೆಗಳಿಗೆ, ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳಾಗಿ ಉನ್ನತೀಕರಿಸಿದಾಗ ಉದ್ಭವಿಸುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳಿಗೆ ನೇಮಿಸಲಾಗುತ್ತಿದೆ ಹಾಗೂ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ

ಶಾಲೆಗಳಿಗೆ (8ನೇ ತರಗತಿ) ಸೇರಿಸಿದಾಗ, ವಿಜ್ಞಾನ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಿ ಭರ್ತಿ ಮಾಡಲು ಸರ್ವ ಶಿಕ್ಷಣ ಅಭಿಯಾನದಡಿ ಅನುಮತಿ ನೀಡಿದೆ ಈ ಶಾಲೆಗಳಿಗೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಗ್ರೇಡ್–2 ವೃಂದದವರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ

ಆ) ಈ ಶಿಕ್ಷಕರಿಗೆ ಗೌರವ ಧನವನ್ನು ನೀಡುತ್ತಿಲ್ಲ ಆದರೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಗ್ರೇಡ್–2 ವೃಂದದ ಶಿಕ್ಷಕರಿಗೆ ನೀಡುತ್ತಿರುವ ವೇತನದಂತೆ ಸರ್ವ ಶಿಕ್ಷಣ ಅಭಿಯಾನದಡಿ ನೇಮಕಾತಿ ಹೊಂದಿದ ಶಿಕ್ಷಕರಿಗೆ ಯೋಜನೆಯಡಿ ವೇತನವನ್ನು ಪಾವತಿಸಲಾಗುತ್ತಿದೆ ಈ ಯೋಜನೆ ಮುಗಿದ ನಂತರ ಶಿಕ್ಷಕರಿಗೆ ರಾಜ್ಯ ಸರ್ಕಾರದಿಂದ ವೇತನವನ್ನು ಪಾವತಿ ಮಾಡಲಾಗುತ್ತದೆ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರ ವೇತನ ಶ್ರೇಣಿ 3300–6300 ರಂತೆ ವೇತನ ನೀಡಲಾಗುತ್ತಿದೆ

ಇ) ಸರ್ವ ಶಿಕ್ಷಣ ಅಭಿಯಾನ ಯೋಜನೆ ಅಡಿಯಲ್ಲಿ 10433 ಪ್ರಾಥಮಿಕ ಹಾಗೂ 5356 ತರಬೇತಿ ಹೊಂದಿದ ಪದವೀಧರ (ಟಿ ಜಿ ಟಿ) ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ

461(455) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಹಾಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು),

ಆ) ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಉ) * ಪ್ರಸ್ತುತ ರಾಜ್ಯದಲ್ಲಿ 8,379 ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ (ಜಿಲ್ಲಾವಾರು ವಿವರದ ಪಟ್ಟಿ ಲಗತ್ತಿಸಿದೆ)